ಗಿಡಗಂಟಿಗಳನ್ನು ತೆಗೆದು ಚರಂಡಿಗಳನ್ನು ನಿರ್ಮಾಣ ಮಾಡಿ ವಾಹನ ಸಂಚಾರಕ್ಕೆ ಸುಗಮಗೊಳಿಸಲಾಗಿದೆ. ರಾಜ್ಯ ಹೆದ್ದಾರಿ ನವೀಕರಣದ ಅಡಿಯಲ್ಲಿ 6.70 ಕಿ.ಮೀ. ಉದ್ದದ ರಸ್ತೆಯ ಭಾಗವನ್ನು ಡಾಂಬರೀಕರಣ ಮಾಡಲಾಗಿದೆ.

ಕೃಷಿ ಮೇಳ

235 (610) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ):– ಕೃಷಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಷ್ಟ್ರೀಯ ಕೃಷಿ ಮೇಳಕ್ಕೆ ಖರ್ಚಾದ ಹಣವೆಷ್ಟು ;

ಆ) ಈ ಮೇಳದಲ್ಲಿ ಭಾಗವಹಿಸಿದ್ದ ರೈತರಿಗೆ ಉಂಟಾದ ಪ್ರಯೋಜನಗಳೇನು;

ಇ) ರೈತರ ಬೆಳೆಗಳಿಗೆ ಉತ್ಪಾದನಾ ವೆಚ್ಚ ಆಧರಿಸಿ ಬೆಂಬಲ ಬೆಲೆ ನೀಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

ಈ) ಸರ್ಕಾರವು ಕಳೆದ ವರ್ಷದ ಬಜೆಟ್‌ನಲ್ಲಿ ಘೋಷಣೆ ಮಾಡಿರುವ ಅನುದಾನವನ್ನು ಸಂಪೂರ್ಣ ಉಪಯೋಗ ಮಾಡಿಕೊಂಡಿದೆಯೇ ;

ಉ) ಹಾಗಿದ್ದಲ್ಲಿ, ಸರ್ಕಾರದ ಮಾನದಂಡವೇನು ?

ಶ್ರೀ ಉಮೇಶ್ ವಿ. ಕತ್ತಿ (ಕೃಷಿ ಸಚಿವರು):–

ಅ) ಅಂದಾಜು ರೂ. 50.00 ಲಕ್ಷಗಳು.

ಆ) ರೈತರಿಗೆ ಇತ್ತೀಚೆಗೆ ಬಿಡುಗಡೆಗೊಳಿಸಿದ ತಳಿಗಳು, ಸಂಕರಣ ತಳಿಗಳು, ವಿವಿಧ ಪ್ರದೇಶಗಳಿಗೆ ಸೂಕ್ತವಾಗಬಲ್ಲ ಬೆಳೆ ಪದ್ಧತಿಗಳು, ಜಲಾನಯನ ನಿರ್ವಹಣೆ ಸಮಗ್ರ ಹಿಡುವಳಿ ಪದ್ಧತಿ ಪ್ರಾತ್ಯಕ್ಷಿಕೆ, ನಿಖರ ಕೃಷಿ, ಸಮಗ್ರ ಪೋಷಕಾಂಶ ನಿರ್ವಹಣೆ, ಹವಾಮಾನ ವೈಪರಿತ್ಯ ಅನುಗುಣವಾಗಿ ಕೃಷಿ ಪದ್ಧತಿ, ಜೈವಿಕ ಹಾಗೂ ನವೀಕರಿಸಲ್ಪಡುವ ಇತರೆ ಇಂಧನ ಮೂಲಗಳು, ಮಳೆ ನೀರಿನ ಕೋಯ್ಲು ಮತ್ತು ಅರೆ ನೀರಾವರಿ ಪದ್ಧತಿಯಲ್ಲಿ ಭತ್ತದ ಬೇಸಾಯ ಪದ್ಧತಿಗಳು ಮುಂತಾದ ಆಧುನಿಕ ತಂತ್ರಜ್ಞಾನಗಳ ಬಗ್ಗೆ ರೈತರಿಗೆ ಮಾಹಿತಿಯನ್ನು ನೀಡಲಾಗಿದೆ.

ಇ) ರೈತರು ಬೆಳೆಯುವ ಪ್ರಮುಖ ಕೃಷಿ ಉತ್ಪನ್ನಗಳಿಗೆ ಅವುಗಳ ಉತ್ಪಾದನಾ ವೆಚ್ಚವನ್ನಾಧರಿಸಿ ಪ್ರತೀ ವರ್ಷ ಮುಂಗಾರು ಹಾಗೂ ಹಿಂಗಾರು ಹಂಗಾಮಿನ ಪೂರ್ವದಲ್ಲಿ ಕೇಂದ್ರ ಸರ್ಕಾರವು ಬೆಂಬಲ ಬೆಲೆಯನ್ನು ಘೋಷಿಸುತ್ತಿದ್ದು ಬೆಲೆ ಕುಸಿತಕ್ಕೊಳಗಾದ ಸಂದರ್ಭದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ವ್ಯಾಪ್ತಿಗೆ ಒಳಪಡದ ಉತ್ಪನ್ನಗಳಾದ ಈರುಳ್ಳಿ, ಆಲೂಗಡ್ಡೆ, ಟೊಮ್ಯಾಟೋ ಹಾಗೂ ಹಸಿಮೆಣಸಿನಕಾಯಿಗಳಂತಹ ಉತ್ಪನ್ನಗಳ

ಬೆಲೆ ಕುಸಿತಕ್ಕೊಳಗಾದ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಫ್ಲೋರ್ ಪ್ರೈಸ್ ಯೋಜನೆಯಡಿ ಅವುಗಳ ಉತ್ಪಾದನಾ ವೆಚ್ಚವನ್ನಾಧರಿಸಿ ಬೆಂಬಲ ಬೆಲೆ ನಿಗದಿಪಡಿಸಿ ಖರೀದಿ ಸಂಸ್ಥೆಗಳ ಮೂಲಕ ಉತ್ಪನ್ನಗಳನ್ನು ಖರೀದಿಸುವ ವ್ಯವಸ್ಥೆ ಮಾಡಲಾಗುತ್ತಿದೆ.

ಈ) ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅನುಷ್ಠನಕ್ಕಾಗಿ ರಾಜ್ಯ ಸರ್ಕಾರವು ಕಳೆದ ವರ್ಷದ ಬಜೆಟ್‌ನಲ್ಲಿ ರೂ. 6.50 ಕೋಟಿ ಅನುದಾನ ಬಿಡುಗಡೆ ಮಾಡಲು ಘೋಷಿಸಿ, ಅದರಲ್ಲಿ ರೂ. 3.25 ಕೋಟಿಗಳನ್ನು ಅವರ್ತ ನಿಧಿಗೆ ಬಿಡುಗಡೆ ಮಾಡಿರುತ್ತದೆ. ಸದರಿ ಸಾಲಿನಲ್ಲಿ ಮೆಕ್ಕೆಜೋಳ, ಭತ್ತ, ಅಡಿಕೆ ಹಾಗೂ ತೆಂಗಿನಕಾಯಿ ಖರೀದಿಸಲು ಅವರ್ತ ನಿಧಿಯಿಂದ ರೂ. 130.50 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಕಳೆದ ವರ್ಷ ಸರ್ಕಾರ ಬಿಡುಗಡೆ ಮಾಡಿದ ಅನುದಾನವನ್ನು ಅವರ್ತ ನಿಧಿಯಿಂದ ಸಂಪೂರ್ಣವಾಗಿ ಉಪಯೋಗ ಮಾಡಿಕೊಂಡಿದೆ.

ಉ) ಸಗಟು ಮಾರುಕಟ್ಟೆಯಲ್ಲಿ ಸರ್ಕಾರವು ಘೋಷಿಸಿದ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುತ್ತಿರುವ ಸಂದರ್ಭದಲ್ಲಿ ರೈತರ ಹಿತದೃಷ್ಟಿಯಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆ, ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆ ಹಾಗೂ ಫ್ಲೋರ್ ಪ್ರೈಸ್ ಯೋಜನೆಯಡಿ ಉತ್ಪನ್ನಗಳನ್ನು ರೈತರಿಂದ ಖರೀದಿಸಲಾಗುತ್ತಿದೆ. ರೈತರ ಹಿತದೃಷ್ಟಿಯಿಂದ ತಕ್ಷಣ ರೈತರಿಗೆ ಬೆಂಬಲ ಬೆಲೆ ನೀಡಿ ಹಣ ಸಂದಾಯ ಮಾಡಲು ಅವರ್ತ ನಿಧಿ ಮೊತ್ತವನ್ನು ಬಳಸಿಕೊಳ್ಳಲಾಗುತ್ತದೆ.

ಸಕ್ಕರೆ ಕಾರ್ಖಾನೆ ಪ್ರಾರಂಭ

236 (611) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ):- ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ರಾಜ್ಯದಲ್ಲಿ ಹೊಸದಾಗಿ ತೆರೆಯಲು ಉದ್ದೇಶಿಸಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಹಾಗಿದ್ದಲ್ಲಿ, ಯಾವ ಸ್ಥಳಗಳಲ್ಲಿ ತೆರೆಯಲು ಉದ್ದೇಶಿಸಿದೆ ? ವಿವರವಾದ ಮಾಹಿತಿಯನ್ನು ಒದಗಿಸುವುದು)

ಆ) ಸಕ್ಕರೆ ಕಾರ್ಖಾನೆಗಳನ್ನು ಪ್ರಾರಂಭಿಸಲು ಇರುವ ಮಾರ್ಗಸೂಚಿಗಳ್ಯಾವುವು?

ಇ) ಬಿಜಾಪುರ ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆ ಪ್ರಾರಂಭಿಸಲು ಸರ್ಕಾರಿ ಭೂ ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಿದೆಯೇ (ವಿವರ ನೀಡುವುದು)

ಶ್ರೀ ಎಸ್. ಎಂ. ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು):-